## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಹಂಗರಹಳ್ಳಿ ಗ್ರಾಮದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು (ಬಿಸಿಡಬ್ಲ್ಯೂಡಿ-620) ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನಾಗಿ ಉನ್ನತೀಕರಿಸಿ, ಮೊಸಳೆ ಹೊಸಹಳ್ಳಿ ಗ್ರಾಮಕ್ಕೆ ಸ್ಥಳಾಂತರಿಸುವ ಕುರಿತು.

**ಓದಲಾಗಿದೆ:** ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಹಿಂವಕನಿ/ವನಿಶಾ-3/ಸಿಆರ್-34/2021-22, ದಿನಾಂಕ:02.02.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಹಾಸನ ಇವರು ಹಾಸನ ಜಿಲ್ಲೆ ಹಾಸನ ತಾಲ್ಲೂಕು, ಮೊಸಳೆ ಹೊಸಹಳ್ಳಿ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ 01 ಪದವಿ ಕಾಲೇಜು, 01 ಪದವಿ ಪೂರ್ವ ಕಾಲೇಜು, 01 ಕೈಗಾರಿಕೆ ತರಬೇತಿ ಸಂಸ್ಥೆಗಳು, 01 ಇಂಜಿನಿಯರಿಂಗ್ ಕಾಲೇಜು, 01 ಐ.ಟಿ.ಐ/ಡಿಪ್ಲೋಮ ಶಿಕ್ಷಣ ಸಂಸ್ಥೆಗಳಿಗೆ 5 ಕಿ.ಮೀ ದೂರದಿಂದ 407 ವಿದ್ಯಾರ್ಥಿನಿಯರು ವ್ಯಾಸಂಗಕ್ಕಾಗಿ ಬರುತ್ತಿದ್ದು, ಈ ಭಾಗದ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಯರ ಉನ್ನತ ವಿದ್ಯಾಭ್ಯಾಸಕ್ಕೆ ಸಹಕಾರಿಯಾಗುವುದಾಗಿಯೂ ಹಾಗೂ ಹೊಳೆನರಸೀಪುರ ತಾಲ್ಲೂಕಿನ ಹಂಗರಹಳ್ಳಿ ಗ್ರಾಮದ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಕ್ಕೆ ಕಳೆದ ವರ್ಷ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲವೆಂದು ಹಾಗೂ ಸ್ಥಳಾಂತರಿಸಿದಲ್ಲಿ ಮೊಸಳೆ ಹೊಸಹಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಉಚಿತ ಕಟ್ಟಡ ಲಭ್ಯವಿರುವುದಾಗಿಯೂ ತಿಳಿಸಿರುತ್ತಾರೆ.

ಹೆಚ್ಚುವರಿಯಾಗಿ ರಾತ್ರಿ ಕಾವಲುಗಾರರ ಒಂದು ಹುದ್ದೆಯನ್ನು ಚಿಕ್ಕಮಗಳೂರು ಜಿಲ್ಲೆ, ಶೃಂಗೇರಿ ತಾಲ್ಲೂಕು, ಕಿಗ್ಗಾ ಗ್ರಾಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಬೇಡಿಕೆ ಇಲ್ಲದಿರುವ ಕಾರಣ ಸದರಿ ನಿಲಯವನ್ನು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನಾಗಿ ಪರಿವರ್ತಿಸಲು ಬೇಡಿಕೆಯಿರುವುದರಿಂದ ಇಲ್ಲಿ ಉಳಿಕೆಯಾಗುವ ರಾತ್ರಿ ಕಾವಲುಗಾರರ 01 ಹುದ್ದೆಯನ್ನು ಮೊಸಳೆಹೊಸಳ್ಳಿ ಗ್ರಾಮಕ್ಕೆ ಉನ್ನತೀಕರಿಸಿ ಸ್ಥಳಾಂತರಿಸಲು ಕೋರಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ವರ್ಗಾಯಿಸಬಹುದಾಗಿರುತ್ತದೆ. ಆದ್ದರಿಂದ, ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕು, ಹಂಗರಹಳ್ಳಿ ಗ್ರಾಮದಲ್ಲಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ಬಿಸಿಡಬ್ಲ್ಯೂಡಿ-620), ಈ ವಿದ್ಯಾರ್ಥಿನಿಲಯವನ್ನು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನಾಗಿ ಉನ್ನತೀಕರಿಸಿ ಹಾಲಿ ಹುದ್ದೆಗಳ ಸಹಿತ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

2...

31/03/2022

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 64 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:-31.03.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಹಂಗರಹಳ್ಳಿ ಗ್ರಾಮದ ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯವನ್ನು ಈ ಕೆಳಕಂಡಂತೆ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯವನ್ನಾಗಿ ಉನ್ನತೀಕರಿಸಿ ಮೊಸಳೆ ಹೊಸಹಳ್ಳಿ ಗ್ರಾಮಕ್ಕೆ ಸ್ಥಳಾಂತರಿಸಿ ಆದೇಶಿಸಲಾಗಿದೆ.

| HIC No. | ಹಾಲಿ ಇರುವ ವಿದ್ಯಾರ್ಥಿನಿಲಯದ ಹೆಸರು ಮತ್ತು ಸ್ಥಳ | ಉನ್ನತೀಕರಿಸಿ ಸ್ಥಳಾಂತರಿಸಿರುವ ವಿದ್ಯಾರ್ಥಿನಿಲಯದ ವಿವರ |
|---|---|---|
| BCWD 620 | ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಂಗರಹಳ್ಳಿ ಗ್ರಾಮ, ಹೊಳೆನರಸೀಪುರ ತಾಲ್ಲೂಕು, ಹಾಸನ ಜಿಲೆ,. (ಮಂಜೂರಾತಿ ಸಂಖ್ಯೆ-50) | ಮೆಟ್ರಿಕ್-ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಮೊಸಳೆ ಹೊಸಹಳ್ಳಿ ಗ್ರಾಮ, ಹಾಸನ ತಾಲ್ಲೂಕು, ಹಾಸನ ಜಿಲ್ಲೆ (ಮಂಜೂರಾತಿ ಸಂಖ್ಯೆ-50). |

ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಕಿಗ್ಗಾ ಗ್ರಾಮ, ಶೃಂಗೇರಿ ತಾಲ್ಲೂಕು ಚಿಕ್ಕಮಗಳೂರು ಜಿಲ್ಲೆ (BCWD-317) ಈ ನಿಲಯದಲ್ಲಿನ ರಾತ್ರಿ ಕಾವಲುಗಾರರ 01 ಹುದ್ದೆಯನ್ನು ಸದರಿ ವಿದ್ಯಾರ್ಥಿನಿಲಯಕ್ಕೆ ಸ್ಥಳಾಂತರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 126 ವೆಚ್ಚ-3/2022, ದಿನಾಂಕ:29.03.2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Shaheen parveen 31/03/2022

**(ಶಾಹೀನ್ ಪರ್ವೀನ್ .ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

3...

3. ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ.
4. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಹಾಸನ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌದ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**********